## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 53 (412+386+377)

ಮಾನ್ಯ ಸದಸ್ಯರುಗಳ ಹೆಸರು : ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ),

ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ), ಮತ್ತು

ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು),

ಉತ್ತರಿಸುವ ದಿನಾಂಕ : 07.12.2023

ಉತ್ತರಿಸುವವರು : ಮಾನ್ಯ ಮುಖ್ಯಮಂತ್ರಿಗಳು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ದಿನಾಂಕ: 01.04.2006 ರಿಂದ ಜಾರಿಗೆ ಬಂದಿರುವ ಹೊಸ ಪಿಂಚಣಿ ಯೋಜನೆಯಿಂದ (ಎನ್.ಪಿ.ಎಸ್) ಸರ್ಕಾರಿ ಹಾಗೂ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರು ಪಿಂಚಣಿಯಿಂದ ವಂಚಿತರಾಗಿ ಅತೀವ ಆರ್ಥಿಕ ಸಂಕಷ್ಟದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಇಲ್ಲ |
| ಆ) | ರಾಜ್ಯದಲ್ಲಿ ಹಳೆ ಪಿಂಚಣಿ ಯೋಜನೆಯನ್ನು ಜಾರಿಗೆ ತರುವ ಸಂಬಂಧ ಈಗಾಗಲೇ ಹಳೆ ಪಿಂಚಣಿ ಯೋಜನೆಯನ್ನು ಜಾರಿಗೊಳಿಸಿರುವ ರಾಜ್ಯಗಳಲ್ಲಿ ಅಧ್ಯಯನ ನಡೆಸಿ, ವರದಿಯನ್ನು ಸಲ್ಲಿಸುವಂತೆ ಸರ್ಕಾರ ಅಧಿಕಾರಿಗಳ ಸಮಿತಿಯನ್ನು ರಚಿಸಿದೆಯೇ; | ಹೌದು.<br>ಸರ್ಕಾರದ ಆದೇಶ ಸಂಖ್ಯೆ: ಆಇ-ಪಿಇಎನ್/89/2023, ದಿನಾಂಕ: 01.03.2023ರಲ್ಲಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ರಾಜ್ಯದಲ್ಲಿ ಜಾರಿ ಇರುವ ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ರದ್ದು ಪಡಿಸುವ ಸಂಬಂಧ ಈಗಾಗಲೇ ಹಳೆ ಪಿಂಚಣಿ ಯೋಜನೆಯನ್ನು ಮರು ಜಾರಿ ಮಾಡಿರುವ ರಾಜ್ಯಗಳಲ್ಲಿ ಈ ಯೋಜನೆಯನ್ನು ಅನುಷ್ಠಾನಗೊಳಿಸಿರುವ ಕುರಿತು ಕೈಗೊಂಡಿರುವ ಕ್ರಮಗಳ ಬಗ್ಗೆ ಅಧ್ಯಯನ ನಡೆಸಿ ವರದಿ ಸಲ್ಲಿಸಲು ಸಮಿತಿ ರಚಿಸಿ ಆದೇಶಿಸಿದೆ.<br>ಸದರಿ ಸಮಿತಿಯು ವರದಿ ಸಲ್ಲಿಸಿರುವುದಿಲ್ಲ. |
| ಇ) | ಹಾಗಿದ್ದಲ್ಲಿ ಅಧಿಕಾರಿಗಳ ಸಮಿತಿಯು ಈ ಸಂಬಂಧ ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿದೆಯೇ; ವರದಿಯನ್ನು ಸಲ್ಲಿಸಿದ್ದಲ್ಲಿ, ಸದರಿ ವರದಿಯ ಮುಖ್ಯಾಂಶಗಳೇನು; ಈ ಸಮಿತಿಗೆ ವರದಿ ಸಲ್ಲಿಸಲು ಕಾಲಮಿತಿಯನ್ನು ನಿಗದಿ ಪಡಿಸಲಾಗಿದೆಯೆ; (ಪೂರ್ಣ ಮಾಹಿತಿ ನೀಡುವುದು) | |
| ಈ) | ಸಲ್ಲಿಸದಿದ್ದಲ್ಲಿ, ಯಾವ ಕಾಲಮಿತಿಯಲ್ಲಿ | ಸಮಿತಿಯ ವರದಿಯನ್ನು ನಿರೀಕ್ಷಿಸಲಾಗಿದೆ. |

<table>
<tr><td></td><td>ಸರ್ಕಾರಿ/ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರಿಗೆ ಹಳೆ ಪಿಂಚಣಿ ಯೋಜನೆಯನ್ನು ಜಾರಿಗೊಳಿಸಲಾಗುವುದು;</td><td></td></tr>
<tr><td>ಉ)</td><td>ರಾಜ್ಯದಲ್ಲಿ ಹಳೆ ನಿವೃತ್ತಿ ವೇತನ ಪಡೆಯುತ್ತಿರುವವರ ಸಂಖ್ಯೆ ಎಷ್ಟು; ಸರ್ಕಾರ ನೌಕರರಿಗೆ ವಿತರಿಸುತ್ತಿರುವ ಹಳೆ ನಿವೃತ್ತಿ ಪಿಂಚಣಿ ಮೊತ್ತವೆಷ್ಟು; (ಪ್ರಸಕ್ತ ಸಾಲಿನ ಸಂಪೂರ್ಣ ಮಾಹಿತಿ ನೀಡುವುದು)</td><td>ಪ್ರಸಕ್ತ ಸಾಲಿನ ವೆಚ್ಚವು Budget Line ಅನ್ವಯ ಈ ಕೆಳಕಂಡಂತೆ ಇರುತ್ತದೆ:-
<table>
<tr><th></th><th colspan="2">State Pensioners</th><th colspan="2">Local Body Pensioners</th></tr>
<tr><td>category</td><td>No. of Pensioners</td><td>Exp as per Budget Line (in crores)</td><td>No. of Pensioners</td><td>Exp as per Budget Line (in crores)</td></tr>
<tr><td>Regular</td><td>319552</td><td>8127.56</td><td>8484</td><td>166.81</td></tr>
<tr><td>Family</td><td>196722</td><td>2366.68</td><td>10660</td><td>133.40</td></tr>
<tr><td>Total</td><td>5,16,274</td><td>10494.24</td><td>19,141</td><td>300.21</td></tr>
</table>
</td></tr>
<tr><td>ಊ)</td><td>ಈ ಹೊಸ ಪಿಂಚಣಿ ವ್ಯವಸ್ಥೆಯಡಿ ಕಾರ್ಯನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು; ಇಂತಹ ನೌಕರರನ್ನು ಒ.ಪಿ.ಎಸ್. ವ್ಯವಸ್ಥೆಯಡಿ ತಂದರೆ ಅಥವಾ ಜಾರಿಗೊಳಿಸಿದರೆ ತಗಲಬಹುದಾದ ಅಂದಾಜು ವೆಚ್ಚವೆಷ್ಟು?(ವಿವರ ನೀಡುವುದು)</td><td>ದಿನಾಂಕ: 04.11.2023ರ NSDL-CRA ರವರ ವರದಿಯಂತೆ ರಾಷ್ಟ್ರೀಯ ಪಿಂಚಣಿ ಯೋಜನೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರ ಸಂಖ್ಯೆ: 2,67,505.<br><br>ಎನ್.ಪಿ.ಎಸ್. ಯೋಜನೆಯನ್ನು ರದ್ದುಪಡಿಸುವ ಕ್ರಮದಿಂದ ಸರ್ಕಾರಕ್ಕೆ ಆಗಬಹುದಾದ ಆರ್ಥಿಕ ಹೊರೆಯನ್ನು ಲೆಕ್ಕಾಚಾರ ಮಾಡುವುದು ಬಹಳ ಸಂಕೀರ್ಣವಾದ ಒಂದು ಪ್ರಕ್ರಿಯೆಯಾಗಿದೆ. ಪಿಂಚಣಿಯ ಲೆಕ್ಕಾಚಾರವು ಸರ್ಕಾರಿ ನೌಕರರು ತಮ್ಮ Last Drawn Pay ಆಧರಿಸಿ ನಿಗಧಿಪಡಿಸಬೇಕಾಗಿದೆ.<br><br>ಸರ್ಕಾರಿ ನೌಕರರಿಗೆ ಲಭ್ಯವಾಗಬಹುದಾದ ವಾರ್ಷಿಕ ಬಡ್ತಿ, ಡಿ.ಎ., ಕಾಲಕಾಲಕ್ಕೆ ನೇಮಕವಾಗಬಹುದಾದ ವೇತನ ಆಯೋಗಗಳ ಶಿಫಾರಸ್ಸಿನ ಹಿನ್ನೆಲೆಯಲ್ಲಿ ಸರ್ಕಾರವು ಮಾಡಬಹುದಾದ ವೇತನ ಪರಿಷ್ಕರಣೆ ಇತ್ಯಾದಿಗಳಂತೆ Last Drawn Pay ನಿಗಧಿಯಾಗುವುದರಿಂದ ಇಂತಹ ಲೆಕ್ಕಾಚಾರಗಳನ್ನು ನಿಖರವಾಗಿ ಮಾಡುವುದು ಕಷ್ಟಸಾಧ್ಯವಾಗಿರುತ್ತದೆ.</td></tr>
</table>

ಆಇ-ಪಿಇಎನ್/ 362 /2023

(ಸಿದ್ದರಾಮಯ್ಯ)
ಮುಖ್ಯಮಂತ್ರಿ